All India Radio: Bangalore
National Bulletin In Kannada
23.03.2026 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಪಶ್ಚಿಮ ಏಷ್ಯಾ ಸಂಘರ್ಷ ; ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಭದ್ರತೆ ಕುರಿತ ಸಂಪುಟ ಸಮಿತಿ ಸಭೆ
- ಲೋಕಸಭೆಯಲ್ಲಿಂದು ಕೇಂದ್ರ ಹಣಕಾಸು ಸಚಿವರಿಂದ ಕಾರ್ಪೋರೇಟ್ ಕಾನೂನುಗಳ ತಿದ್ದುಪಡಿ ವಿಧೇಯಕ ೨೦೨೬ ಮಂಡನೆ ನಿರೀಕ್ಷೆ
- ಕೇರಳ, ಅಸ್ಸಾಂ, ಪುದುಚೇರಿ ವಿಧಾನಸಭಾ ಚುನಾವಣೆ ; ನಾಮಪತ್ರ ಸಲ್ಲಿಕೆಗೆ ಇಂದು ಕೊನೆಯ ದಿನ
- ಇಂದು ಶಹೀದ್ ದಿವಸ್ ; ದೇಶದ ೭೬೩ ಜಿಲ್ಲೆಗಳಲ್ಲಿ 'ಮೇರಾ ಯುವ ಭಾರತ್' ವತಿಯಿಂದ ಬೃಹತ್ ಪಾದಯಾತ್ರೆ ಆಯೋಜನೆ
- ಇಂಡಿಯನ್ ಓಪನ್ ಸ್ಕ್ವಾಷ್ ಟೂರ್ನಿ; ಪುರುಷರ ಸಿಂಗಲ್ಸ್‌ನಲ್ಲಿ ಭಾರತದ ಅಭಯ್ ಸಿಂಗ್‌ಗೆ ಪ್ರಶಸ್ತಿ

<><><><>

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದ ಹಿನ್ನೆಲೆಯಲ್ಲಿ ಉದ್ಭವಿಸಿರುವ ಜಾಗತಿಕ ಪರಿಸ್ಥಿತಿ ಮತ್ತು ಭಾರತದ ಮೇಲಾಗುವ ಪರಿಣಾಮಗಳನ್ನು ಎದುರಿಸಲು ಕೈಗೊಂಡಿರುವ ಮುನ್ನೆಚ್ಚರಿಕಾ ಕ್ರಮಗಳ ಕುರಿತು ಪ್ರಧಾನಿ ನರೇಂದ್ರ ಮೋದಿ, ನಿನ್ನೆ ಭದ್ರತಾ ವ್ಯವಹಾರಗಳ ಸಂಪುಟ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಪರಾಮರ್ಶೆ ನಡೆಸಿದರು. ಈ ಸಂಘರ್ಷವು ಇಡೀ ವಿಶ್ವದ ಮೇಲೆ ಪ್ರಭಾವ ಬೀರುತ್ತಿದ್ದು, ದೇಶದ ನಾಗರಿಕರಿಗೆ ಯಾವುದೇ ರೀತಿಯ ಅನಾನುಕೂಲವಾಗದಂತೆ ಮತ್ತು ಅಗತ್ಯ ವಸ್ತುಗಳ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಸರ್ಕಾರದ ಎಲ್ಲಾ ಅಂಗಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಪ್ರಧಾನಿ ಸೂಚನೆ ನೀಡಿದ್ದಾರೆ. ವಿಶೇಷವಾಗಿ ಅಗತ್ಯ ವಸ್ತುಗಳ ಕಾಳಸಂತೆ ಮತ್ತು ಆತಂಕದ ದಾಸ್ತಾನು ತಡೆಯಲು ರಾಜ್ಯ ಸರ್ಕಾರಗಳೊಂದಿಗೆ ನಿಕಟವಾಗಿ ಕೆಲಸ ಮಾಡುವಂತೆ ಅವರು ನಿರ್ದೇಶನ ನೀಡಿದರು. ಸಭೆಯಲ್ಲಿ

ಸಂಪುಟ ಕಾರ್ಯದರ್ಶಿ ಡಾ. ಟಿ.ವಿ.ಸೋಮನಾಥನ್ ಜಾಗತಿಕ ವಿದ್ಯಮಾನಗಳ ಕುರಿತು ವಿವರವಾದ ಮಾಹಿತಿ ನೀಡಿದರು. ಕೃಷಿ, ರಸಗೊಬ್ಬರ, ಆಹಾರ ಭದ್ರತೆ, ಪೆಟ್ರೋಲಿಯಂ, ವಿದ್ಯುತ್ ಮತ್ತು ಸಣ್ಣ, ಅತಿಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಮೇಲೆ ಉಂಟಾಗಬಹುದಾದ ಪರಿಣಾಮಗಳನ್ನು ತಗ್ಗಿಸಲು ಕೈಗೊಳ್ಳಬೇಕಾದ ಅಲ್ಪಾವಧಿ ಮತ್ತು ದೀರ್ಘಾವಧಿಯ ಕ್ರಮಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. 'ಸಂಪೂರ್ಣ ಸರ್ಕಾರ' ಎಂಬ ಸಮಗ್ರ ದೃಷ್ಟಿಕೋನದೊಂದಿಗೆ ಕಾರ್ಯನಿರ್ವಹಿಸಲು ಸಚಿವರು ಮತ್ತು ಕಾರ್ಯದರ್ಶಿಗಳ ವಿಶೇಷ ಗುಂಪನ್ನು ರಚಿಸಲು ಪ್ರಧಾನಿ ಆದೇಶಿಸಿದ್ದಾರೆ. ಆಮದು ಮೂಲಗಳನ್ನು ವೈವಿಧ್ಯಗೊಳಿಸುವುದು ಮತ್ತು ಭಾರತೀಯ ಉತ್ಪನ್ನಗಳಿಗೆ ಹೊಸ ರಫ್ತು ಮಾರುಕಟ್ಟೆಗಳನ್ನು ಕಂಡುಕೊಳ್ಳುವ ಮೂಲಕ ದೇಶದ ಆರ್ಥಿಕ ಸ್ಥಿರತೆಯನ್ನು ಕಾಪಾಡಲು ಸರ್ಕಾರವು ಬದ್ಧವಾಗಿದೆ ಎಂದು ಸಭೆಯಲ್ಲಿ ತೀರ್ಮಾನಿಸಲಾಯಿತು.

<><><><>

ಸಂಸತ್ತಿನ ಎರಡೂ ಸದನಗಳಲ್ಲಿ ಇಂದು ಮಹತ್ವದ ವಿಧೇಯಕಗಳು ಮಂಡನೆಗೊಳ್ಳಲಿವೆ. ಲೋಕಸಭೆಯಲ್ಲಿ ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಕಾರ್ಪೊರೇಟ್ ಕಾನೂನುಗಳ ತಿದ್ದುಪಡಿ ವಿಧೇಯಕ ೨೦೨೬ನ್ನು ಪರಿಚಯಿಸಲಿದ್ದಾರೆ. ಈ ವಿಧೇಯಕವು ಲಿಮಿಟೆಡ್ ಲಯಬಿಲಿಟಿ ಪಾರ್ಟ್‌ನರ್‌ಶಿಪ್ ಕಾಯ್ದೆ ೨೦೦೮ ಹಾಗೂ ಕಂಪನಿಗಳ ಕಾಯ್ದೆ ೨೦೧೩ಕ್ಕೆ ತಿದ್ದುಪಡಿ ತರಲು ಉದ್ದೇಶಿಸಿದೆ. ಇದಲ್ಲದೆ, ೨೦೨೬-೨೭ನೇ ಹಣಕಾಸು ವರ್ಷಕ್ಕೆ ಸಂಬಂಧಿಸಿದ ಕೇಂದ್ರ ಸರ್ಕಾರದ ಆರ್ಥಿಕ ಪ್ರಸ್ತಾವನೆಗಳನ್ನು ಜಾರಿಗೆ ತರುವ ಹಣಕಾಸು ವಿಧೇಯಕ ೨೦೨೬ ಕೂಡ ಚರ್ಚೆ ಮತ್ತು ಅಂಗೀಕಾರಕ್ಕಾಗಿ ಪಟ್ಟಿಯಲ್ಲಿದೆ. ರಾಜ್ಯಸಭೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ, ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಸಾಮಾನ್ಯ ಆಡಳಿತ ವಿಧೇಯಕ ೨೦೨೬ನ್ನು ಪರಿಚಯಿಸಲಿದ್ದಾರೆ. ಈ ವಿಧೇಯಕವು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಅಧಿಕಾರಿಗಳ ನೇಮಕಾತಿ ಮತ್ತು ಸೇವಾ ನಿಯಮಗಳನ್ನು ನಿಯಂತ್ರಿಸುವುದನ್ನು ಉದ್ದೇಶಿಸಿದೆ.

<><><><>

ಅಸ್ಸಾಂ, ಕೇರಳ ಮತ್ತು ಪುದುಚೇರಿ ವಿಧಾನಸಭಾ ಚುನಾವಣೆಗಳಿಗೆ ನಾಮಪತ್ರ ಸಲ್ಲಿಕೆ ಇಂದು ಅಂತ್ಯಗೊಳ್ಳಲಿದೆ. ಈ ಎರಡು ರಾಜ್ಯಗಳು ಹಾಗೂ ಒಂದು ಕೇಂದ್ರಾಡಳಿತ ಪ್ರದೇಶದಲ್ಲಿ ಏಪ್ರಿಲ್ ೯ರಂದು ಒಂದೇ ಹಂತದಲ್ಲಿ ಮತದಾನ ನಡೆಯಲಿದೆ. ನಾಮಪತ್ರಗಳ ಪರಿಶೀಲನೆ ನಾಳೆ

ನಡೆಯಲಿದ್ದು, ನಾಮಪತ್ರ ಹಿಂಪಡೆಯಲು ಇದೇ ೨೬ ಕೊನೆಯ ದಿನವಾಗಿದೆ. ತಮಿಳುನಾಡಿನಲ್ಲಿ ಏಪ್ರಿಲ್ ೨೩ರಂದು ಮತದಾನ ನಡೆಯಲಿದ್ದು, ಪಶ್ಚಿಮ ಬಂಗಾಳದಲ್ಲಿ ಏಪ್ರಿಲ್ ೨೩ ಮತ್ತು ೨೯ರಂದು ಎರಡು ಹಂತಗಳಲ್ಲಿ ಮತದಾನ ನಡೆಯಲಿದೆ. ತಮಿಳುನಾಡು ಹಾಗೂ ಪಶ್ಚಿಮ ಬಂಗಾಳದ ಮೊದಲ ಹಂತದ ಅಧಿಸೂಚನೆ ಇದೇ ೩೦ ರಂದು ಪ್ರಕಟವಾಗಲಿದೆ. ಚುನಾವಣೆ ಘೋಷಣೆಯಾಗಿರುವ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದ ಮತ ಎಣಿಕೆ ಮೇ ೪ರಂದು ನಡೆಯಲಿದೆ. ಈ ನಡುವೆ ಕೇರಳದ ೧೪೦ ಕ್ಷೇತ್ರಗಳಲ್ಲಿ ಇದುವರೆಗೆ ಒಟ್ಟು ೩೪೧ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ. ಚುನಾವಣಾ ಪ್ರಕ್ರಿಯೆ ಚುರುಕುಗೊಂಡಿದ್ದು, ರಾಜಕೀಯ ಪಕ್ಷಗಳು ಪ್ರಚಾರ ಕಾರ್ಯಗಳನ್ನು ತೀವ್ರಗೊಳಿಸುತ್ತಿವೆ.

<><><>

ಪಶ್ಚಿಮ ಬಂಗಾಳದ ಪಶ್ಚಿಮ ಬರ್ಧಮಾನ ಜಿಲ್ಲೆಯ ದುರ್ಗಾಪುರದಲ್ಲಿ ಚುನಾವಣಾ ಆಯೋಗದ ಇಬ್ಬರು ಸಿಬ್ಬಂದಿಗಳ ಮೇಲೆ ದಾಳಿ ನಡೆದಿದೆ. ಆಯೋಗದ ನಿರ್ದೇಶನದಂತೆ ಸರ್ಕಾರಿ ಗೋಡೆಗಳ ಮೇಲಿನ ರಾಜಕೀಯ ಬರಹಗಳನ್ನು ತೆರವುಗೊಳಿಸುತ್ತಿದ್ದ ಸೂರ್ಯಕಾಂತ ಪಾಲ್ ಮತ್ತು ಬಿಟ್ಟು ಗುಪ್ತಾ ಮೇಲೆ ದಾಳಿ ನಡೆದಿರುವುದು ವರದಿಯಾಗಿದೆ. ಕೆಲಸ ಮುಗಿಸಿ ವಾಹನಕ್ಕೆ ಹತ್ತುವ ವೇಳೆ ತೃಣಮೂಲ ಕಾಂಗ್ರೆಸ್ ಬೆಂಬಲಿಗರು ದಾಳಿ ನಡೆಸಿದರೆಂದು ಹೇಳಲಾಗಿದೆ. ತಕ್ಷಣವೇ ಕೇಂದ್ರ ಪಡೆಗಳು ಮತ್ತು ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದಿದ್ದಾರೆ. ಘಟನೆಗೆ ಬಿಜೆಪಿ ತೀವ್ರ ಖಂಡನೆ ವ್ಯಕ್ತಪಡಿಸಿದ್ದು, ಪ್ರತಿಭಟನೆ ನಡೆಸಿದ ತಮ್ಮ ಇಬ್ಬರು ಕಾರ್ಯಕರ್ತರ ಮೇಲೂ ಹಲ್ಲೆ ನಡೆದಿದೆ ಎಂದು ಆರೋಪಿಸಿದೆ.

<><><>

ಕ್ರಾಂತಿಕಾರಿ ಸ್ವಾತಂತ್ರ್ಯ ಹೋರಾಟಗಾರರಾದ ಭಗತ್ ಸಿಂಗ್, ರಾಜ್‌ಗುರು ಮತ್ತು ಸುಖದೇವ್ ಅವರ ಬಲಿದಾನದ ಸ್ಮರಣಾರ್ಥ ಶಹೀದ್ ದಿವಸ್ ಅಂಗವಾಗಿ 'ಮೇರಾ ಯುವ ಭಾರತ್' ವತಿಯಿಂದ ಇಂದು ದೇಶಾದ್ಯಂತ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ. 'ನನ್ನ ಭಾರತ ನನ್ನ ಜವಾಬ್ದಾರಿ' ಎಂಬ ಘೋಷವಾಕ್ಯದಡಿ ಈ ಅಭಿಯಾನ ನಡೆಯುತ್ತಿದ್ದು, ಯುವಜನತೆಯಲ್ಲಿ ರಾಷ್ಟ್ರಪ್ರೇಮ ಮತ್ತು ಜವಾಬ್ದಾರಿಯುತ ನಾಗರಿಕ ಪ್ರಜ್ಞೆ ಜಾಗೃತಿಗೊಳಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ ತಿಳಿಸಿದೆ. ದೇಶದ ಎಲ್ಲಾ ೭೬೩ ಜಿಲ್ಲೆಗಳಲ್ಲಿ ಈ ಪಾದಯಾತ್ರೆಗಳು ಏಕಕಾಲದಲ್ಲಿ ನಡೆಯಲಿವೆ. ಹರಿಯಾಣದ

ಫರಿದಾಬಾದ್‌ನಲ್ಲಿ ಪ್ರಧಾನ ಕಾರ್ಯಕ್ರಮ ಆಯೋಜಿಸಲಾಗಿದ್ದು, ೧೦ ಸಾವಿರಕ್ಕೂ ಅಧಿಕ ಯುವಕರು ಪಾಲ್ಗೊಳ್ಳಲಿದ್ದಾರೆ. ಈ ಸಮಾರಂಭದಲ್ಲಿ ಕೇಂದ್ರ ಯುವಜನ ವ್ಯವಹಾರಗಳ ರಾಜ್ಯ ಸಚಿವೆ ರಕ್ಷಾ ಖಡ್ಸೆ ಭಾಗವಹಿಸುತ್ತಿದ್ದಾರೆ. ಭಾರತದ ಸ್ವಾತಂತ್ರ್ಯ ತ್ಯಾಗ ಮತ್ತು ಧೈರ್ಯದಿಂದ ಗಳಿಸಿದ್ದು, ಎಂಬುದನ್ನು ನೆನಪಿಸಲು ಪ್ರತಿವರ್ಷ ಶಹೀದ್ ದಿವಸ್ ಆಚರಿಸಲಾಗುತ್ತದೆ.

<><><>

ಇರಾನ್‌ನ ವಿದ್ಯುತ್ ಸ್ಥಾವರಗಳ ಮೇಲೆ ಅಮೆರಿಕಾ ದಾಳಿ ನಡೆಸಿದರೆ ಹೊರ್ಮುಜ್ ಜಲಸಂಧಿಯನ್ನು ಸಂಪೂರ್ಣ ಮುಚ್ಚುವುದಾಗಿ ಇರಾನ್ ಎಚ್ಚರಿಸಿದೆ. ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕೋರ್ ಈ ಬಗ್ಗೆ ಹೇಳಿಕೆ ನೀಡಿದ್ದು, ಧ್ವಂಸಗೊಂಡ ಸ್ಥಾವರಗಳನ್ನು ಮರುನಿರ್ಮಿಸುವವರೆಗೆ ಜಲಸಂಧಿ ತೆರೆಯುವುದಿಲ್ಲ ಎಂದು ಎಚ್ಚರಿಸಿದೆ.

ಇರಾನ್ ೪೮ ಗಂಟೆಯೊಳಗೆ ಜಲಸಂಧಿಯನ್ನು ತೆರೆಯದಿದ್ದರೆ ಪ್ರಮುಖ ವಿದ್ಯುತ್ ಸ್ಥಾವರಗಳ ಮೇಲೆ ದಾಳಿ ನಡೆಸುವುದಾಗಿ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಸಿ ಬೆನ್ನಲ್ಲೆ ಇರಾನ್‌ನ ಐಆರ್‌ಜಿಸಿ ಪಡೆ ಈ ಹೇಳಿಕೆ ನೀಡಿದೆ. ಜಾಗತಿಕ ತೈಲ ಸಾಗಣೆಗೆ ಪ್ರಮುಖವಾದ ಈ ಜಲಸಂಧಿಯಲ್ಲಿ ವ್ಯತ್ಯಯದಿಂದ ಇಂಧನ ಬೆಲೆ ಏರಿಕೆ ಮತ್ತು ಮಾರುಕಟ್ಟೆ ಅಸ್ಥಿರತೆ ಉಂಟಾಗಿದೆ.

<><><>

ಪಶ್ಚಿಮ ಏಷ್ಯಾಕ್ಕೆ ಏರ್ ಇಂಡಿಯಾ ಮತ್ತು ಏರ್ ಇಂಡಿಯಾ ಎಕ್ಸ್‌ಪ್ರೆಸ್‌ನ ಒಟ್ಟು ೩೦ ವಿಮಾನಗಳು ಇಂದು ಸಂಚರಿಸಲಿವೆ. ಕೆಲವು ಮಾರ್ಗಗಳಲ್ಲಿ ಸೇವೆಗಳು ಮಿತವಾಗಿದ್ದರೂ, ಜೆದ್ದಾಕ್ಕೆ ೧೦ ವಿಮಾನಗಳು ಸಂಚರಿಸಲಿವೆ. ದೆಹಲಿ ಮತ್ತು ಮುಂಬೈಯಿಂದ ಏರ್ ಇಂಡಿಯಾ ಸೇವೆ ನೀಡಲಿದ್ದು, ಬೆಂಗಳೂರು, ಕೋಜಿಕೋಡ್ ಮತ್ತು ಮಂಗಳೂರುಗಳಿಂದ ಏರ್ ಇಂಡಿಯಾ ಎಕ್ಸ್‌ಪ್ರೆಸ್ ವಿಮಾನಗಳು ಸಂಚರಿಸಲಿವೆ. ಮಸ್ಕಟ್ ಮತ್ತು ರಿಯಾದ್‌ಗೆ ಸಹ ಸೇವೆಗಳು ಲಭ್ಯವಿವೆ. ಯುಎಇಯ ದುಬೈ, ಅಬುದಾಬಿ ಮತ್ತು ಶಾರ್ಜಾಗೆ ಹೆಚ್ಚುವರಿ ವಿಮಾನಗಳು ಸಂಚರಿಸಲಿವೆ. ಇತರ ಅಂತಾರಾಷ್ಟ್ರೀಯ ಮಾರ್ಗಗಳಲ್ಲಿ ಸೇವೆಗಳು ವೇಳಾಪಟ್ಟಿಯಂತೆ ಮುಂದುವರೆಯುತ್ತಿವೆ.

<><><>

ಮುಂಬೈನಲ್ಲಿ ನಿನ್ನೆ ನಡೆದ ಇಂಡಿಯನ್ ಓಪನ್ ಸಶ್ ಟೂರ್ನಿಯ ಪುರುಷರ ಹಾಗೂ ಮಹಿಳಾ ಸಿಂಗಲ್ಸ್ ವಿಭಾಗದಲ್ಲಿ ಭಾರತ ಚಾಂಪಿಯನ್‌ಪಟ್ಟ ಅಲಂಕರಿಸಿದೆ. ನಿನ್ನೆ ನಡೆದ ಪುರುಷರ

ಸಿಂಗಲ್ಸ್ ವಿಭಾಗದ ಫೈನಲ್ ಪಂದ್ಯದಲ್ಲಿ ಭಾರತದ ಅಭಯ್‌ಸಿಂಗ್, ಭಾರತದವರೇ ಆದ ವೀರ್ ಚೊತ್ರಾಣಿ ವಿರುದ್ಧ ೩-೦ ಅಂತರದಲ್ಲಿ ಗೆಲುವು ದಾಖಲಿಸಿದರು. ಇದಕ್ಕೂ ಮುನ್ನ ನಡೆದ ಮಹಿಳಾ ಸಿಂಗಲ್ಸ್ ವಿಭಾಗದ ಫೈನಲ್‌ನಲ್ಲಿ ಭಾರತದ ಅನಹತ್ ಸಿಂಗ್, ಈಜಿಪ್ಟ್‌ನ ಹನಾ ಮೊತಾಜ್ ವಿರುದ್ಧ ೩-೧ ಅಂತರದಲ್ಲಿ ಗೆಲುವು ದಾಖಲಿಸಿ ಪ್ರಶಸ್ತಿ ತಮ್ಮದಾಗಿಸಿಕೊಂಡರು.

<><><><>

ಛತ್ತೀಸ್‌ಗಢ ಇದೇ ೨೫ರಿಂದ ಏಪ್ರಿಲ್ ೩ರವರೆಗೆ ನಡೆಯಲಿರುವ ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟ ೨೦೨೬ಕ್ಕೆ ಅತಿಥ್ಯ ವಹಿಸಲಿದೆ. ರಾಜ್ಯದ ಪ್ರಮುಖ ನಗರಗಳಾದ ರಾಯಪುರ, ಜಗದಲ್‌ಪುರ ಮತ್ತು ಸುರ್ಗುಜಾದಲ್ಲಿ ಈ ಕ್ರೀಡಾಕೂಟ ಆಯೋಜಿಸಲಾಗಿದ್ದು, ಒಟ್ಟು ೨ ಸಾವಿರದ ೩೦೦ ಕ್ರೀಡಾಪಟುಗಳು ಸೇರಿದಂತೆ ೬ ಸಾವಿರಕ್ಕೂ ಅಧಿಕ ಮಂದಿ ಪಾಲ್ಗೊಳ್ಳಲಿದ್ದಾರೆ. ಶೇಕಡ ೩೨ಕ್ಕಿಂತ ಹೆಚ್ಚು ಬುಡಕಟ್ಟು ಜನಸಂಖ್ಯೆಯನ್ನು ಹೊಂದಿರುವ ಛತ್ತೀಸ್‌ಗಢ ತನ್ನ ಸಮೃದ್ಧ ಸಾಂಸ್ಕೃತಿಕ ಪರಂಪರೆ ಮತ್ತು ಕ್ರೀಡಾ ನೈಪುಣ್ಯತೆ ಹಿನ್ನೆಲೆಯಲ್ಲಿ ಈ ಕ್ರೀಡಾಕೂಟಕ್ಕೆ ಉತ್ತಮ ತಾಣವಾಗಿದೆ. ಕ್ರೀಡಾಕೂಟದಲ್ಲಿ ಬಿಲ್ಲುಗಾರಿಕೆ, ಅಥ್ಲೆಟಿಕ್ಸ್, ಫುಟ್ಬಾಲ್, ಹಾಕಿ, ಈಜು, ವೇಟ್‌ಲಿಫ್ಟಿಂಗ್ ಮತ್ತು ಕುಸ್ತಿಯಂತಹ ಪ್ರಮುಖ ಕ್ರೀಡೆಗಳ ಸ್ಪರ್ಧೆಗಳು ನಡೆಯಲಿವೆ. ಇದರ ಜೊತೆಗೆ ಮಲ್ಲಕಂಬ ಮತ್ತು ಕಬಡ್ಡಿಯನ್ನು ಪ್ರದರ್ಶನ ಕ್ರೀಡೆಗಳಾಗಿ ಅಳವಡಿಸಲಾಗಿದೆ.

<><><><>

ಸ್ಪೇನ್‌ನ ವಿಕ್ಟೋರಿಯಾದಲ್ಲಿ ಮಾರ್ಚ್ ೧೬ರಿಂದ ೨೨ರವರೆಗೆ ನಡೆದ ಸ್ಪ್ಯಾನಿಶ್ ಪ್ಯಾರಾ ಬ್ಯಾಡ್ಮಿಂಟನ್ ಅಂತಾರಾಷ್ಟ್ರೀಯ ಪಂದ್ಯಾವಳಿಯಲ್ಲಿ ಭಾರತದ ಕ್ರೀಡಾಪಟುಗಳು ಅಭೂತಪೂರ್ವ ಸಾಧನೆ ಮಾಡಿದ್ದಾರೆ. ನಿನ್ನೆ ಮುಕ್ತಾಯಗೊಂಡ ಈ ಪಂದ್ಯಾವಳಿಯಲ್ಲಿ ಭಾರತದ ಪ್ರಮೋದ್ ಭಗತ್ ೨ ಚಿನ್ನ ಮತ್ತು ಒಂದು ಬೆಳ್ಳಿ ಪದಕ ಗೆದಿದ್ದಾರೆ. ಪುರುಷರ ಸಿಂಗಲ್ಸ್ ಎಸ್‌ಎಲ್ ಮೂರು ವಿಭಾಗದ ಫೈನಲ್‌ನಲ್ಲಿ ಪ್ರಮೋದ್ ಭಾರತದವರೇ ಆದ ನಿತೇಶ್ ಕುಮಾರ್ ಅವರನ್ನು ಮಣಿಸಿ ಚಿನ್ನದ ಪದಕ ತಮ್ಮದಾಗಿಸಿಕೊಂಡಿದ್ದಾರೆ. ಪುರುಷರ ಸಿಂಗಲ್ಸ್ ಎಸ್‌ಎಲ್ ನಾಲ್ಕು ವಿಭಾಗದ ಫೈನಲ್‌ನಲ್ಲಿ ಭಾರತದ ಸುಕಾಂತ್ ಕದಮ್, ದಕ್ಷಿಣ ಕೊರಿಯಾದ ಚೊ ನಾಡನ್ ಅವರನ್ನು ಮಣಿಸಿ ಸ್ವರ್ಣ ಪದಕಕ್ಕೆ ಭಾಜನರಾಗಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>